# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 268
ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶಿತರು)
ಉತ್ತರಿಸಬೇಕಾದ ದಿನಾಂಕ : 29.01.2026.
ಉತ್ತರಿಸಬೇಕಾದ ಸಚಿವರು : ಸನ್ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2025/26ನೇ ಸಾಲಿನ ಮಾರ್ಚ್ ಆಯವ್ಯಯದಲ್ಲಿ ಘೋಷಿಸಿದಂತೆ 13 ಅರಣ್ಯಾಧಾರಿತ ಮೂಲ ಆದಿವಾಸಿ ಬುಡಕಟ್ಟು ಸಮುದಾಯಗಳಿಗೆ ವಿಶೇಷ ನೇರ ನೇಮಕಾತಿ ಮಾಡಲಾಗುವುದು ಎಂದು ಸರ್ಕಾರ ಘೋಷಿಸಿದ್ದು ವಿಶೇಷ ನೇರ ನೇಮಕಾತಿಗಳನ್ನು ಮಾಡಲಾಗಿದೆಯೇ; (ಮಾಹಿತಿ ನೀಡುವುದು) | 2025-26ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-199ರಲ್ಲಿ "ಅರಣ್ಯ, ಅರಣ್ಯದಂಚಿನ ಹಾಡಿಗಳಲ್ಲಿ ವಾಸ ಮಾಡುತ್ತಿರುವ 13 ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಇರುಳಿಗ, ಕೊರಗ, ಸೋಲಿಗ, ಯರವ, ವಣಿಯನ್, ಹಲಸರು, ಗೌಡಲು, ಸಿದ್ದಿ, ಬೆಟ್ಟಕುರುಬ, ಕಾಡುಕುರುಬ, ಕುಡಿಯ ಮತ್ತು ಮಲೆಕುಡಿಯ ಈ ಜನಾಂಗಗಳಿಗೆ ರಾಜ್ಯ ಸಿವಿಲ್ ಸೇವೆಗಳಲ್ಲಿ ಪ್ರಾತಿನಿಧ್ಯ ನೀಡುವ ಸಲುವಾಗಿ ವಿಶೇಷ ನೇರ ನೇಮಕಾತಿಯನ್ನು ಕೈಗೊಳ್ಳಲಾಗುವುದು" ಎಂದು ಘೋಷಿಸಲಾಗಿರುತ್ತದೆ.<br><br>ಸದರಿ ಘೋಷಣೆ ಸಂಬಂಧ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿರುತ್ತದೆ.<br><br>• ವಿಶೇಷ ನೇರ ನೇಮಕಾತಿ ಕೈಗೊಳ್ಳುವ ಕುರಿತಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಕಾನೂನು ಇಲಾಖೆಯಿಂದ ಪ್ರಾಥಮಿಕ ಅಭಿಪ್ರಾಯ ಪಡೆದು ದಿನಾಂಕ: 27.01.2026ರಂದು ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗಳೊಂದಿಗೆ ಸಭೆ ನಡೆಸಲಾಗಿರುತ್ತದೆ.<br><br>• 13 ಬುಡಕಟ್ಟು ಸಮುದಾಯಗಳ ಜನರು ಹೆಚ್ಚು ವಾಸಿಸುವ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಮೈಸೂರು, ಚಾಮರಾಜನಗರ, ಕೊಡಗು, ರಾಮನಗರ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಖಾಲಿ ಇರುವ ಗ್ರೂಪ್-ಸಿ ಮತ್ತು ಡಿ ವೃಂದದ ಹುದ್ದೆಗಳ ವಿವರಗಳನ್ನು ಒದಗಿಸುವಂತೆ ವಿವಿಧ ಇಲಾಖೆಗಳನ್ನು ಕೋರಲಾಗಿದೆ.<br><br>• ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಖಾಲಿ ಇರುವ ಹುದ್ದೆಗಳ ಮಾಹಿತಿ ಸ್ವೀಕೃತವಾಗಿದ್ದು, ಇನ್ನುಳಿದ ಕಂದಾಯ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಶೇಷ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆಗಳಿಂದ ಮಾಹಿತಿಯನ್ನು ನಿರೀಕ್ಷಿಸಲಾಗಿದೆ. |

| | | |
|---|---|---|
| | | ಸದರಿ ಇಲಾಖೆಗಳಿಂದ ಮಾಹಿತಿ ಸ್ವೀಕೃತವಾದ ನಂತರ ವಿಶೇಷ ನೇರ ನೇಮಕಾತಿ ನಿಯಮಗಳನ್ನು ರಚಿಸುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆಯಿಂದ ಅಭಿಪ್ರಾಯ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು. |
| ಆ) | ವಿಶೇಷ ನೇರ ನೇಮಕಾತಿಯು ಯಾವ ಯಾವ ಗ್ರೂಪ್ ಹುದ್ದೆಗಳಿಗೆ ಅನ್ವಯಿಸುತ್ತದೆ; (ಸಂಪೂರ್ಣ ಮಾಹಿತಿ ನೀಡುವುದು) | ಈ ಕುರಿತು ಪರಿಶೀಲನಾ ಹಂತದಲ್ಲಿದೆ. |
| ಇ) | ಅರಣ್ಯ ಆಧಾರಿತ ಬುಡಕಟ್ಟುಗಳಿಗೆ ವಿಶೇಷ ನೇರ ನೇಮಕಾತಿಯೂ ಎಲ್ಲಾ ಗ್ರೂಪ್ ಹುದ್ದೆಗಳಿಗೆ ಅನ್ವಯಿಸದೆ ಕೇವಲ ಸಿ ಮತ್ತು ಡಿ ಗ್ರೂಪ್ ಹುದ್ದೆಗಳಿಗೆ ಮಾತ್ರ ಸೀಮಿತವಾಗಿರುವುದಕ್ಕೆ ಕಾರಣಗಳೇನು? (ಮಾಹಿತಿ ನೀಡುವುದು) | |

**ಸಂಖ್ಯೆ: STW/SECB/STP/10/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿಗಳು